1462ಲಿಖಿತ
ನಿ-72
ಕ್ರ-60
ಕಂಪ್ಯೂಟರ್

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ, ವೇತನ ಹೆಚ್ಚಳ, ಸರಿಯಾದ ಸಮಯಕ್ಕೆ ವೇತನ ಬಿಡುಗಡೆ ಮಾಡದಿರುವ ಕುರಿತು ಹಾಗೂ ಇನ್ನಿತರೆ ಸಮಸ್ಯೆಗಳನ್ನು ಪರಿಹರಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ

**ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಬಗ್ಗೆ:**

ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗೆ ಅನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಆಯಾ ಕಾಲೇಜಿನ ಖಾಯಂ ಅಧ್ಯಾಪಕರುಗಳಿಗೆ ಹಂಚಿಕೆ ಮಾಡಿ, ತದನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ. ಅಲ್ಲದೆ, ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಯಾವುದೇ ಖಾಲಿ ಹುದ್ದೆಗಳಿಗೆ ಅಥವಾ ಪೂರ್ಣಕಾಲಿಕ ಕಾರ್ಯಭಾರಕ್ಕೆ ನೇಮಕಾತಿ ಮಾಡಿಕೊಳ್ಳಲಾಗುತ್ತಿಲ್ಲವಾದ್ದರಿಂದ, ಅವರುಗಳ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಸೇವಾ ಭದ್ರತೆಯನ್ನು ಒದಗಿಸಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

**ಅತಿಥಿ ಉಪನ್ಯಾಸಕರ ವೇತನ ಹೆಚ್ಚಳದ ಕುರಿತು:**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 66 ಡಿಸಿಇ 2017, ದಿನಾಂಕ:04.04.2017 ರನ್ವಯ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳೊಂದಿಗೆ ಎನ್‌ಇಟಿ/ ಎಸ್‌ಎಲ್‌ಇಟಿ/ ಪಿ.ಹೆಚ್‌ಡಿ ಹೊಂದಿದವರಿಗೆ ರೂ.13,000/- ಹಾಗೂ ಸ್ನಾತಕೋತ್ತರ/ ಎಂ.ಫಿಲ್ ಹೊಂದಿದವರಿಗೆ ರೂ.11,000/- ಗಳ ಗೌರವಧನವನ್ನು ಪಾವತಿಸಲಾಗುತ್ತಿತ್ತು, ಪ್ರಸ್ತುತ, ಸರ್ಕಾರಿ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು ತಿದ್ದುಪಡಿ ಆದೇಶದ ದಿನಾಂಕ:24.01.2022 ಗಳಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಕಲಾ ಮತ್ತು ವಾಣಿಜ್ಯ ವಿಭಾಗಕ್ಕೆ 8 ಗಂಟೆ ಮತ್ತು ವಿಜ್ಞಾನ ವಿಭಾಗಕ್ಕೆ10 ಗಂಟೆಗಳ ಕಾರ್ಯಭಾರಕ್ಕೆ ಬದಲಾಗಿ ಕಲಾ ಮತ್ತು ವಾಣಿಜ್ಯ ವಿಭಾಗಕ್ಕೆ 15 ಗಂಟೆ ಮತ್ತು ವಿಜ್ಞಾನ ವಿಭಾಗಕ್ಕೆ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಈ ಕೆಳಗಿನಂತೆ ಗೌರವಧನವನ್ನು ಪರಿಷ್ಕರಿಸಿ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿ ಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿ ಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

**ಅತಿಥಿ ಉಪನ್ಯಾಸಕರಿಗೆ ನಿಗದಿತ ಸಮಯದಲ್ಲಿ ವೇತನ ಬಿಡುಗಡೆ ಮಾಡುವ ಕುರಿತು**

ಸರ್ಕಾರದಿಂದ ಅನುದಾನವನ್ನು 04 ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತಿದ್ದು, ಪ್ರತಿ ಕಂತಿನ ಅನುದಾನ ಬಿಡುಗಡೆಯಾದ ಕೂಡಲೇ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಲು ಸಂಬಂಧಿಸಿದ ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಅದರಂತೆ, 2020-21ನೇ ಶೈಕ್ಷಣಿಕ ಸಾಲಿನ 2, 4, & 6ನೇ ಸೆಮಿಸ್ಟರ್ (ಮೇ-2021 ರಿಂದ ಆಗಸ್ಟ್-2021) ಅವಧಿಯಲ್ಲಿ ಆಗಸ್ಟ್-2021 ರ ಮಾಹೆಯವರೆಗೂ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಲು ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಪ್ರಸ್ತುತ 2021-22ನೇ ಶೈಕ್ಷಣಿಕ ಸಾಲಿನ 1, 3 & 5ನೇ ಸೆಮಿಸ್ಟರ್ ಅವಧಿಯ ತರಗತಿಗಳು ಅಕ್ಟೋಬರ್-2021 ರಿಂದ ಪ್ರಾರಂಭಗೊಂಡಿದ್ದು, ಈ ಅವಧಿಯ ಡಿಸೆಂಬರ್-2021ರ ಮಾಹೆಯವರೆಗೂ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಲು ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

**ಇಡಿ 49 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**

146ನೇ ಅಧಿವೇಶನ ನಿ-72 ಕ್ರ-113 ಕಂಪ್ಯೂಟರ್

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 14,564 ಅತಿಥಿ ಉಪನ್ಯಾಸಕರ ಸೇವೆಯನ್ನು ಪರಿಗಣಿಸಿ ಇವರ ಸೇವಾ ವಿಲೀನಗೊಳಿಸಿ, ಖಾಯಂಗೊಳಿಸುವ ಬಗ್ಗೆ, ಸರ್ಕಾರದ ಗಮನ ಸೆಳೆಯುತ್ತೇನೆ.

## ಉತ್ತರ

ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗೆ ಅನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಆಯಾ ಕಾಲೇಜಿನ ಖಾಯಂ ಅಧ್ಯಾಪಕರುಗಳಿಗೆ ಹಂಚಿಕೆ ಮಾಡಿ, ತದನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ. ಅಲ್ಲದೆ, ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಯಾವುದೇ ಖಾಲಿ/ ಮಂಜೂರಾದ ಹುದ್ದೆಗಳಿಗೆ ಎದುರಾಗಿ ನೇಮಕಾತಿ ಮಾಡಿಕೊಳ್ಳಲಾಗುತ್ತಿಲ್ಲ.

ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗೆ ಅನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಆಯಾ ಕಾಲೇಜಿನ ಖಾಯಂ ಅಧ್ಯಾಪಕರುಗಳಿಗೆ ಹಂಚಿಕೆ ಮಾಡಿ, ತದನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿತ್ತು. ತದನಂತರ, ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18.12.2003 ರಲ್ಲಿ ಈ ರೀತಿ ಉಳಿಕೆ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರ ಬದಲಿಗೆ ತಾತ್ಕಾಲಿಕವಾಗಿ ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಸೀಮಿತಗೊಳಿಸಿ, ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಆದೇಶಿಸಿಸಲಾಗಿದೆ.

ಸದರಿ ಸುತ್ತೋಲೆಯಲ್ಲಿ ಅತಿಥಿ ಉಪನ್ಯಾಸಕರಿಗೆ ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಟ 8 ಗಂಟೆಗಳ ಕಾರ್ಯಭಾರವನ್ನು ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ ವಿಷಯಗಳಲ್ಲಿ ಗರಿಷ್ಟ 10 ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿದ್ದು, ಅದರಂತೆ 2020-21ನೇ ಶೈಕ್ಷಣಿಕ ಸಾಲಿನವರೆಗೂ ಮುಂದುವರೆಸಲಾಗಿದೆ. ಈ ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಮತ್ತು ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/- ಗಳ ಮಾಸಿಕ ಗೌರವಧನವನ್ನು ನಿಗಧಿಪಡಿಸಲಾಗಿರುತ್ತದೆ.

ಪ್ರಸ್ತುತ, 2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು ತಿದ್ದುಪಡಿ ಆದೇಶ ದಿನಾಂಕ:24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಟ 8 ಗಂಟೆಗಳ ಕಾರ್ಯಭಾರವನ್ನು ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ ವಿಷಯಗಳಲ್ಲಿ ಗರಿಷ್ಟ 10 ಕಾರ್ಯಭಾರಕ್ಕೆ ಬದಲಾಗಿ, ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಟ 15 ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಹೆಚ್ಚಿಸಲಾಗಿದೆ. ಅಲ್ಲದೆ, ಅತಿಥಿ ಉಪನ್ಯಾಸಕರಾಗಿ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದವರಿಗೆ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಪ್ರಾಧ್ಯಾನ್ಯತೆ ನೀಡಲು ಆದೇಶಿಸಲಾಗಿದೆ. ಹೆಚ್ಚಿಸಲಾಗಿರುವ ಗೌರವಧನದ ವಿವರ ಈ ಕೆಳಗಿನಂತಿದೆ;

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

ಅದರಂತೆ, ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಯಂ ಉಪನ್ಯಾಸಕರಿಗೆ ಹಂಚಿಕೆಯಾಗಿ ಉಳಿಕೆಯಾಗಿರುವ ಕಾರ್ಯಭಾರನ್ನು ನಿರ್ವಹಿಸಲು, ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಠ 15 ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ 19 ಗಂಟೆಗಳ ಕಾರ್ಯಭಾರವನ್ನು ಹಾಗೂ ಭಾಗಶಃ ಉಳಿಕೆ ಕಾರ್ಯಭಾರದ ಆಧಾರದ ಮೇಲೆ ಲಭ್ಯವಾಗಿರುವ ಕಾರ್ಯಭಾರಕ್ಕೆ ಅಗತ್ಯವಿರುವ ಅಂದಾಜು 10,500 ಅತಿಥಿ ಉಪನ್ಯಾಸಕರನ್ನು ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಈ ಹಿಂದೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರನ್ನು ನೇಮಿಸಿಕೊಳ್ಳಲು ಕ್ರಮವಹಿಸಲಾಗಿದೆ. ಅದರನ್ವಯ ಅತಿಥಿ ಉಪನ್ಯಾಸಕರ ಆಯ್ಕೆಗೆ ಏಕರೂಪವಾಗಿ ನಡೆಸಲಾದ ಎರಡು ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ದಿನಾಂಕ:07.03.2022 ರಲ್ಲಿದ್ದಂತೆ, 8484 ಅತಿಥಿ ಉಪನ್ಯಾಸಕರು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಉಳಿದಂತೆ ಕಾಲೇಜುಗಳಲ್ಲಿ ಇನ್ನೂ ಲಭ್ಯವಿರುವ/ ಉಳಿಕೆಯಾಗಿರುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಪ್ರಕ್ರಿಯೆ ಮುಂದುವರೆದಿದೆ.

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಖಾಯಂಗೊಳಿಸುವ ಬಗ್ಗೆ; **ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ** 55 **ಡಿಸಿಇ** 2005, **ದಿನಾಂಕ**:25.08.2012 **ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ** 1994-95 **ರ ನಂತರ ಅರೆಕಾಲಿಕ ಉಪನ್ಯಾಸಕರಾಗಿ ಮತ್ತು** 2004-05 **ರ ನಂತರ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರನ್ನು ಯಾವುದೇ ಕಾರಣಕ್ಕೂ ಸಕ್ರಮಗೊಳಿಸಲಾಗುವುದಿಲ್ಲ. ಅದು ಕಾನೂನು ವಿರುದ್ಧವಾದದ್ದು ಹಾಗೂ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದದ್ದು, ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ/ಮುಂದೆ ಉದ್ಭವಿಸಬಹುದಾದ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕವೇ ತುಂಬಬೇಕಾಗುತ್ತದೆ ಎಂಬುದಾಗಿ ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ.**

**ಮುಂದುವರೆದು, ಅತಿಥಿ ಉಪನ್ಯಾಸಕರ ಸೇವೆಯನ್ನು ಸಕ್ರಮಾತಿಗೊಳಿಸುವಂತೆ** ಕೋರಿ ಮಾನ್ಯ **ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ**:4625-4640/2012(**ಶ್ರೀ ವೀರಣ್ಣ ಎಸ್. ಸಜ್ಜನರ್** ಮತ್ತು ಇತರರು), **ಅರ್ಜಿ ಸಂಖ್ಯೆ**:2526-2532/2014, (**ಶ್ರೀ ಕೆ.ಆರ್.ವಿಶ್ವಕುಮಾರ್** & **ಇತರರು**), **ಅರ್ಜಿ ಸಂಖ್ಯೆ**:1579-1585/2017 (**ಶ್ರೀ ಜಯಚಂದ್ರ** ಕೆ.ಇ. & **ಇತರರು**) **ಮತ್ತು** ಇತ್ತೀಚಿನ **ಅರ್ಜಿ ಸಂಖ್ಯೆ**: 823-839/2020 (ಶ್ರೀ ಸಕಲೇಶ್ ಹೆಚ್.ಜಿ & ಇತರರು) ಗಳಿಗೆ ಮಾನ್ಯ ನ್ಯಾಯಮಂಡಳಿಯು ನೀಡಿದ ತೀರ್ಪಿನಲ್ಲಿ "**ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ತಾತ್ಕಾಲಿಕ ನೌಕರರನ್ನು ಅವರ ಸೇವಾವಧಿಯನ್ನು ಆಧರಿಸಿ ಸೇವಾ ಸಕ್ರಮಾತಿಗೆ ಪರಿಗಣಿಸಲು ಅರ್ಹರಾಗಿರುವುದಿಲ್ಲವೆಂದು, ಅದೇ ರೀತಿ, ನೇಮಕಾತಿ ನಿಯಮಗಳಂತೆ ನೇಮಕಾತಿ ಆಗದಿರುವ ವ್ಯಕ್ತಿಗಳಿಗೆ ಸಕ್ರಮಾತಿಯ ಹಕ್ಕು ದೊರೆಯುವುದಿಲ್ಲವೆಂದು ಹಾಗೂ ಇಂತಹ ನಿಯಮಬಾಹಿರ ನೇಮಕಾತಿಯನ್ನು ಸಕ್ರಮಾತಿಗೊಳಿಸಬಾರದೆಂದು" ತಿಳಿಸಿರುವ ನಿಲುವನ್ನು ಆಧರಿಸಿ ಸದರಿ ಅರ್ಜಿ**ಗಳನ್ನು ವಜಾಗೊಳಿಸಿರುತ್ತದೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, **ಅತಿಥಿ ಉಪನ್ಯಾಸಕರ** ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಸೇವೆಯಲ್ಲಿ ವಿಲೀನಗೊಳಿಸಲು / ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

**ಇಡಿ 80 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**